# ಕರ್ನಾಟಕ ವಿಧಾನ ಪರಿಷತ್ತು

## ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಇವರು ನಿಯಮ 72ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರ

**ಸೂಚನೆ:**

ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಖಾಲಿ ಇರುವ ಉಪ ನಿರ್ದೇಶಕರ, ಸಹಾಯಕ ನಿರ್ದೇಶಕರ, ಹಿರಿಯ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ನೇಮಕಾತಿ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನಸೆಳೆಯಬಯಸುತ್ತೇನೆ.

**ಉತ್ತರ :**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಹಾಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಆಧುನಿಕ ವಿದ್ಯಾರ್ಹತೆ, ವಿದ್ಯುನ್ಮಾನ ಮಾಧ್ಯಮಗಳಲ್ಲಿ ಸೇವಾನುಭವ, ಅರ್ಹತಾದಾಯಕ ಸೇವೆಯನ್ನು ಪರಿಷ್ಕರಿಸಿ ಹೊಸದಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗುತ್ತಿದ್ದು, ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊರಡಿಸಿದ ಕೂಡಲೇ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಖಾಲಿ ಇರುವ ಹಿರಿಯ ಸಹಾಯಕ ನಿರ್ದೇಶಕರ ಮತ್ತು ಸಹಾಯಕ ನಿರ್ದೇಶಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮ ವಹಿಸಲಾಗುವುದು. ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಖಾಲಿ ಇರುವ ಉಪ ನಿರ್ದೇಶಕರ ಹುದ್ದೆಯನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿದ್ದು, ಭರ್ತಿ ಮಾಡಲು ಉಪ ನಿರ್ದೇಶಕರ ಹುದ್ದೆಯ ಮೂಲ ಪೋಷಕ ವೃಂದವಾದ ಹಿರಿಯ ಸಹಾಯಕ ನಿರ್ದೇಶಕರ ವೃಂದದಲ್ಲಿ 05 ವರ್ಷ ಸೇವೆ ಸಲ್ಲಿಸಿದ ಅಧಿಕಾರಿಗಳು ಲಭ್ಯವಿಲ್ಲದ ಕಾರಣ ಸದರಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲು ಸಾಧ್ಯವಾಗಿರುವುದಿಲ್ಲ.

ವೃಂದ ಮತ್ತು ನೇಮಕಾತಿ ನಿಯಮಗಳು ಅನುಮೋದನೆಗೊಂಡು ಹೊರಡಿಸಿದ ಕೂಡಲೇ ಹಾಗೂ ಮುಂಬಡ್ತಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗುತ್ತಿದ್ದಂತೆಯೇ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಪ್ರಸ್ತುತ ಖಾಲಿ ಇರುವ ಉಪ ನಿರ್ದೇಶಕರು-01, ಹಿರಿಯ ಸಹಾಯಕ ನಿರ್ದೇಶಕರು-04 ಮತ್ತು ಸಹಾಯಕ ನಿರ್ದೇಶಕರು-02 ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮಕೈಗೊಳ್ಳಲಾಗುವುದು. ಪ್ರಸ್ತುತ ಇರುವ ಅಧಿಕಾರಿಗಳನ್ನೇ ಪ್ರಭಾರದಲ್ಲಿಟ್ಟು ಇಲಾಖೆಯ ಕೆಲಸ ಕಾರ್ಯಗಳನ್ನು ಸಮರ್ಥವಾಗಿ ನಿರ್ವಹಿಸಲಾಗುತ್ತಿದೆ.

**ಕೆಸಿಐ-ಪಿಐಪಿ/243/2023**

(ಸಿದ್ದರಾಮಯ್ಯ)
ಮುಖ್ಯಮಂತ್ರಿ